**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 70 ಪಿಬಿಎಸ್ 2003

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 11.02.2011

ಇಂದ:

**ಸರ್ಕಾರದ ಕಾರ್ಯದರ್ಶಿಗಳು,**
ಶಿಕ್ಷಣ ಇಲಾಖೆ,
(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ),
ಬೆಂಗಳೂರು.

ಇವರಿಗೆ:

**ಆಯುಕ್ತರು,**
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು/ಗುಲ್ಬರ್ಗಾ/ಧಾರವಾಡ.

ಮಾನ್ಯರೆ,

**ವಿಷಯ:** ಸ್ವಇಚ್ಛೆಯಿಂದ ಒಂದು ಜಿಲ್ಲೆಯಿಂದ ಮತ್ತೊಂದು ಜಿಲ್ಲೆಗೆ ವರ್ಗಾವಣೆಗೊಂಡ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡುವ ಬಗ್ಗೆ.

**ಉಲ್ಲೇಖ :** ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ (ರಿ), ಬೆಂಗಳೂರು ಇವರು ಸರ್ಕಾರಕ್ಕೆ ಸಲ್ಲಿಸಿರುವ ಮನವಿ ದಿನಾಂಕ: 18.03.2003 ಹಾಗೂ 16.02.2006

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಜಿಲ್ಲಾ ಮಟ್ಟದ ಜೇಷ್ಟತೆಯನ್ನು ಹೊಂದಿರುವ ಶಿಕ್ಷಕರುಗಳು ಒಂದು ಜಿಲ್ಲೆಯಿಂದ ಇನ್ನೊಂದು ಜಿಲ್ಲೆಗೆ ಸ್ವಂತ ಕೋರಿಕೆಯ ಮೇರೆಗೆ ವರ್ಗಾವಣೆಗೊಂಡಿರುವ ಶಿಕ್ಷಕರುಗಳಿಗೆ ಹಿಂದಿನ ಜಿಲ್ಲೆಯಲ್ಲಿನ ಸೇವೆಯನ್ನು ಪರಿಗಣಿಸಿ, 10, 15 ಮತ್ತು 20 ವರ್ಷಗಳ ಸೇವೆಗಾಗಿ ಅನುಕ್ರಮವಾಗಿ ಕಾಲಬದ್ಧ ಬಡ್ತಿ, ಹಿರಿಯ ವೇತನ ಶ್ರೇಣಿಗೆ ಸ್ವಯಂ ಚಾಲಿತ ಮುಂಬಡ್ತಿ ಮತ್ತು ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ನೀಡುವಂತೆ ಬಹಳ ದಿನಗಳಿಂದ ಬೇಡಿಕೆ ಸಲ್ಲಿಸಿರುವುದು ಸರಿಯಷ್ಟೆ.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಮತ್ತು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಧ ಪದಾಧಿಕಾರಿಗಳು, ಶಾಲಾ ಶಿಕ್ಷಕರು ರಾಜ್ಯಾದ್ಯಂತ ಯಾವುದೇ ಜಿಲ್ಲೆಯಲ್ಲಿ ಸೇವೆ ಸಲ್ಲಿಸಿದರೂ ಅವರು ಸೇವೆಗೆ ಸೇರಿದ ದಿನಾಂಕದಿಂದ 10 ವರ್ಷದ ಕಾಲಮಿತಿ ಬಡ್ತಿ, 15

ವರ್ಷದ ಹಿರಿಯ ವೇತನ ಶ್ರೇಣಿ ಹಾಗೂ 20 ವರ್ಷದ ಒಂದು ವರ್ಷದ ಒಂದು ಮುಂಬಡ್ತಿಯನ್ನು ನೀಡುವಂತೆ ಕೋರಿರುತ್ತಾರೆ.

ಸದರಿ ಅಂಶವನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಲಾಗಿ, ಒಂದು ಜಿಲ್ಲೆಯಿಂದ ಮತ್ತೊಂದು ಜಿಲ್ಲೆಗೆ ಸ್ವಇಚ್ಛೆಯಿಂದ ವರ್ಗಾವಣೆಗೊಂಡ ಶಿಕ್ಷಕರುಗಳು ಹಿಂದಿನ ಜಿಲ್ಲೆಯಲ್ಲಿ ಸಲ್ಲಿಸಿರುವ ಸೇವೆಯನ್ನು ಜೇಷ್ಟತೆಗಾಗಿ ಪರಿಗಣಿಸದೆ, ಕೇವಲ ಕಾಲಬದ್ಧ ಮುಂಬಡ್ತಿ/ಹಿರಿಯ ವೇತನ ಶ್ರೇಣಿ ಮತ್ತು ಹೆಚ್ಚುವರಿ ವೇತನ ಬಡ್ತಿಯ ಸೌಲಭ್ಯಕ್ಕಾಗಿ ಮಾತ್ರ ಪರಿಗಣಿಸಬಹುದಾಗಿದೆ ಹಾಗೂ ಈ ಸೌಲಭ್ಯವು ವೈಯಕ್ತಿಕವಾಗಿರುವುದರಿಂದ ಆ ಜೇಷ್ಟತಾ ಘಟಕದ ಹಿರಿಯ ನೌಕರರು ವೇತನ ಏರಿಕೆಗೆ ಅರ್ಹರಾಗುವುದಿಲ್ಲ ಎಂದು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

ಈ ಪತ್ರವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 27 ಎಸ್ಆರ್‌ಪಿ 2003, ದಿನಾಂಕ: 21.01.2011 ರಲ್ಲಿ ನೀಡಿರುವ ಅಭಿಪ್ರಾಯದನ್ವಯ ಹೊರಡಿಸಲಾಗಿದೆ.

ತಮ್ಮ ನಂಬುಗೆಯ,

(ಎಂ. ಪ್ರಭುಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರಾಥಮಿಕ).

**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.**

ಸಂಖ್ಯೆ:ಸಿ3[5]ಪ್ರಾಶಿ:ಸಂಘ:ಬೇ:132:2002–03 ದಿನಾಂಕ:14ನೇ ಫೆಬ್ರವರಿ 2011

**: ಜ್ಞಾ ಪ ನ :**

ಸರ್ಕಾರದ ಆದೇಶ ಸಂಖ್ಯೆ:ಇಡಿ:70:ಪಿಬಿಎಸ್:2003, ದಿನಾಂಕ:11.02.2011ರ ಯಥಾ ಪ್ರತಿಯನ್ನು ರವಾನಿಸಿದೆ. ಈ ಬಗ್ಗೆ ನಿಯಮಾನುಸಾರ ಕ್ರಮ ವಹಿಸಲು ತಿಳಿಸಿದೆ.

ನಿರ್ದೇಶಕರು [ಪ್ರಾಥಮಿಕ ಶಿಕ್ಷಣ]
14/2/11

**ಇವರಿಗೆ:**

ರಾಜ್ಯದ ಎಲ್ಲಾ ಉಪನಿರ್ದೇಶಕರು[ಆಡಳಿತ],

**ಪ್ರತಿಯನ್ನು:**

*01.* ಮಹಾಲೇಖಪಾಲರು, ಕರ್ನಾಟಕ ರಾಜ್ಯ, ಬೆಂಗಳೂರು, ಇವರಿಗೆ ಮಾಹಿತಿಗಾಗಿ.
*02.* ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಇಂದಿರಾನಗರ, ಬೆಂಗಳೂರು.
*03.* ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ[ರಿ], ಗಾಂಧಿನಗರ, ಬೆಂಗಳೂರು–09.
*04.* ಕಛೇರಿ ಪ್ರತಿ.

ಪೂರ್ಣಿಮ. \\Typing3server\d\D\EST3\1107-2010.doc